**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 323 |
| ಸದಸ್ಯರ ಹೆಸರು | : | ಡಾ:ಎಂ.ಜಿ.ಮುಳೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 06.03.2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಂಚಾರಿ ಅಪರಾಧಗಳ ಶುಲ್ಕವನ್ನು ಮೊದಲಿಗಿಂತ ಮೂರು ಪಟ್ಟು ಹೆಚ್ಚಿಸಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಗಮನಕ್ಕೆ ಬಂದಿರುತ್ತದೆ. |
| ಆ) | ನೋ ಪಾರ್ಕಿಂಗ್ ಶುಲ್ಕ ದ್ವಿಚಕ್ರ ವಾಹನಗಳಿಗೆ 500 ರೂಪಾಯಿ ಇರುವುದನ್ನು 1600 ರೂಪಾಯಿಗೆ ಏರಿಸಿರುವುದರಿಂದ ಸಾರ್ವಜನಿಕರಿಗೆ ಹೊರೆ ಜಾಸ್ತಿಯಾಗಿದ್ದು, ಇದರಿಂದ ತಪ್ಪಿಸಿಕೊಳ್ಳಲು ಪೊಲೀಸರಿಗೆ ಅನಧಿಕೃತವಾಗಿ ಹಣ ನೀಡಿ ವಾಹನ ಬಿಡಿಸಿಕೊಂಡು ಹೋಗುತ್ತಿರುವುದರಿಂದ ಸರ್ಕಾರಕ್ಕೆ ಆದಾಯ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನೋ ಪಾರ್ಕಿಂಗ್ ನಿಯಮ ಉಲ್ಲಂಘನೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಟಿಡಿ 250 ಟಿಡಿಓ 2019; ದಿನಾಂಕ:21.09.2019ರ ಅನ್ವಯ ಮೊದಲನೆ ಬಾರಿಯ ಸಂಚಾರ ನಿಯಮ ಉಲ್ಲಂಘನೆಗೆ 500/- ರೂ ಗಳನ್ನು ಮತ್ತು ಎರಡನೇ ಬಾರಿಯ ಸಂಚಾರ ನಿಯಮ ಉಲ್ಲಂಘನೆಗೆ ರೂ. 1000/- ರೂ ಗಳನ್ನು ಸಂಗ್ರಹಿಸಲಾಗುತ್ತಿರುತ್ತದೆ. |
| ಇ) | ಸರ್ಕಾರವು ನಿಗದಿಪಡಿಸಿರುವ ದಂಡದ ಹಣವನ್ನು ಕಡಿಮೆ ಮಾಡಿ ಸರ್ಕಾರಕ್ಕೆ ಬರುವ ಆದಾಯವನ್ನು ಹೆಚ್ಚಿಸಿಕೊಳ್ಳುವುದರ ಜೊತೆಗೆ ಸಾರ್ವಜನಿಕರಿಗೂ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಬಗ್ಗೆ ಪರಿಶೀಲನೆ ಮಾಡಲಾಗುವುದೇ ? | ಸರ್ಕಾರದ ಅಧಿಸೂಚನೆ ಸಂಖ್ಯೆ:ಟಿಡಿ 250 ಟಿಡಿಓ 2019, ಬೆಂಗಳೂರು, ದಿನಾಂಕ:03.09.2019ರ ಅನ್ವಯ ನಿಗದಿಪಡಿಸಿದ್ದ ದಂಡವು ಸಾರ್ವಜನಿಕರಿಗೆ ಹೊರೆಯಾಗುತ್ತಿರುವುದನ್ನು ಅವಲೋಕಿಸಿ ಕೆಲವು ಸಂಚಾರ ನಿಯಮ ಉಲ್ಲಂಘನೆಗಳಿಗೆ ನಿಗದಿಪಡಿಸಲಾಗಿದ್ದ ದಂಡದ ಮೊತ್ತವನ್ನು ಪರಿಷ್ಕರಿಸಿ, ದಂಡದ ಮೊತ್ತವನ್ನು ಕಡಿಮೆ ಮಾಡಿ ಅಧಿಸೂಚನೆ ಸಂಖ್ಯೆ: ಟಿಡಿ 250 ಟಿಡಿಓ 2019ನ್ನು ದಿನಾಂಕ:21.09.2019ರಲ್ಲಿ ಹೊರಡಿಸಲಾಗಿದೆ. ಪ್ರಸ್ತುತ ದಿನಾಂಕ:21.09.2019 ರಂದು ದಂಡದ ಮೊತ್ತವನ್ನು ಕಡಿಮೆ ಗೊಳಿಸಿ ಹೊರಡಿಸಿರುವ ಅಧಿಸೂಚನೆಯ ಪ್ರಕಾರ ದಂಡವನ್ನು ಸಂಗ್ರಹಿಸಲಾಗುತ್ತಿರುತ್ತದೆ. |

ಹೆಚ್‌ಡಿ 90 ಎಸ್‌ಎಸ್‌ಟಿ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು